<u>ಕರ್ನಾಟಕ ವಿಧಾನ ಪರಿಷತ್ತು</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2231
ಸದಸ್ಯರ ಹೆಸರು	:	ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	26-03-2021.
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

<table>
<tr><th>ಕ್ರಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಸ್ವಂತ ಕಟ್ಟಡ ಇಲ್ಲದ ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)</td><td>ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಸ್ವಂತ ಕಟ್ಟಡ ಇಲ್ಲದ ಗ್ರಾಮ ಪಂಚಾಯಿತಿಗಳ ಸಂಖ್ಯೆ: 11

ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ.

<table>
<tr><th>ಕ್ರಸಂ</th><th>ಜಿಲ್ಲೆ</th><th>ತಾಲ್ಲೂಕಿನ ಹೆಸರು</th><th>ಸ್ವಂತ ಕಟ್ಟಡವಿಲ್ಲದ ಗ್ರಾಮ ಪಂಚಾಯತಿಗಳ ಸಂಖ್ಯೆ</th></tr>
<tr><td>01</td><td>ಚಿತ್ರದುರ್ಗ</td><td>ಚಿತ್ರದುರ್ಗ</td><td>2</td></tr>
<tr><td>02</td><td></td><td>ಹಿರಿಯೂರು</td><td>2</td></tr>
<tr><td>03</td><td></td><td>ಹೊಳಲ್ಕರೆ</td><td>4</td></tr>
<tr><td>04</td><td>ದಾವಣಗೆರೆ</td><td>ಚನ್ನಗಿರಿ</td><td>1</td></tr>
<tr><td>05</td><td></td><td>ಹರಿಹರ</td><td>1</td></tr>
<tr><td>06</td><td></td><td>ಹೊನ್ನಾಳಿ</td><td>1</td></tr>
<tr><td></td><td></td><td>ಒಟ್ಟು</td><td>11</td></tr>
</table>
</td></tr>
<tr><td>(ಆ)</td><td>ಈ ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಿಕೊಡಲು ಗ್ರಾಮೀಣಾಭಿವೃದ್ಧಿ ಇಲಾಖೆ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ಒದಗಿಸುವುದು)</td><td>ಹೊಸದಾಗಿ ರಚನೆಯಾದ ಗ್ರಾಮ ಪಂಚಾಯತಿ ಕಛೇರಿಗೆ ರೂ 40.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕಟ್ಟಡಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದ್ದು ಈ ಪೈಕಿ ಸರ್ಕಾರದ ಅನುದಾನ ರೂ.20.00 ಲಕ್ಷ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಲ್ಲಿ ಕೈಗೊಳ್ಳುವ ರಾಜೀವ ಗಾಂಧಿ ಸೇವಾ ಕೇಂದ್ರ ನಿರ್ಮಾಣ ಮಾಡಲು ಮೀಸಲಿಟ್ಟಿರುವ ಅನುದಾನ ರೂ.16.25 ಲಕ್ಷ ಹಾಗೂ 14/15ನೇ ಹಣಕಾಸು ಯೋಜನೆ ಅಥವಾ ಗ್ರಾಮ ಪಂಚಾಯತಿಗಳ ಇನ್ನಿತರೆ ಅನುದಾನದಡಿ ಉಳಿಕೆಯಾಗಿರುವ ರೂ.3.75 ಲಕ್ಷಗಳನ್ನು ಬಳಸಿಕೊಳ್ಳಲು ನಿರ್ಧರಿಸಲಾಗಿರುತ್ತದೆ.

ಹೊಸದಾಗಿ ಸೃಜನೆಯಾಗಿರುವ ಗ್ರಾಮ ಪಂಚಾಯತಿಗಳಿಗೆ ತಲಾ ರೂ.10.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ.</td></tr>
</table>

ಸಂ. ಗ್ರಾಅಪ 177 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.